ದಿನಾಂಕಃ **04-04-2024** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಎಂ ಡಿ ಕೆ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸಲ್ಲಿಸಿರುವ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವೆಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ದಾವಾ ಸ್ವತ್ತಿಗೆ ಸಂಬಂಧಪಟ್ಟಿರುವ ವಾದಿ ಮತ್ತು ಪ್ರತಿವಾದಿಯವರ ನಡುವೆ ಆದ ಕ್ರಯ ಪತ್ರದ ದಿಃ 19.10.2009 ನ್ನು ನಿಪಿ-1 ಎಂದು ಗುರುತಿಸಲಾಯಿತು
2. ದಾವಾ ಆಸ್ತಿಗೆ ಸಂಬಂಧಪಟ್ಟಿರುವ ನಿಪಿ -1 ರ ಋಣಭಾರ ಪತ್ರವನ್ನು ನಿಪಿ -2 ಎಂದು ಗುರುತಿಸಲಾಯಿತು.
3. ದಾವಾ ಆಸ್ತಿಗೆ ಸಂಬಂಧಪಟ್ಟಿರುವ ಆರ್ ಟಿ ಸಿ ಎಕ್ಸಟ್ರಾಕ್ಟ ಸರ್ವೇ ನಂ. 10/1 ಸಿ, ಕಸವನಹಳ್ಳಿ ಗ್ರಾಮ, ನೊಣವಿನಕೆರೆ ಹೋಬಳಿ, ತಿಪಟೂರು ತಾಲ್ಲೂಕನ್ನು ನಿಪಿ-3 ಎಂದು ಗುರುತಿಸಲಾಯಿತು.
4. ಸರ್ವೆ ನಂಬರ್ 10/1 ಸಿ ರ ಮುಟೇಶನ್ ರೆಜಿಸ್ಟರ್ ಎಕ್ಸಟ್ರಾಕ್ಟನ್ನು ನಿಪಿ-4 ಎಂದು ಗುರುತಿಸಲಾಯಿತು.
5. ದಿನಾಂಕಃ 23.08.2023 ರ ಪೊಲೀಸ್ ಅಕ್ ನಾಲೆಡ್ಜಮೆಂಟ್ ಪ್ರತಿಯನ್ನು ನಿಪಿ-5 ಎಂದು ಗುರುತಿಸಲಾಯಿತು.
6. ದಾವಾ ಸ್ವತ್ತಿಗೆ ಸಂಬಂಧಪಟ್ಟ ಫೋಟೋಪ್ರತಿಗಳನ್ನು ನಿಪಿ - 6(a), (b), (c), (d), (e) ಎಂದು ಗುರುತಿಸಲಾಯಿತು.
7. ದಾವಾ ಸ್ವತ್ತಿಗೆ ಸಂಬಂಧಪಟ್ಟ ಒಂದು ಸಿಡಿಯನ್ನು ನಿಪಿ-7 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ದಾವೆಯನ್ನು ನನ್ನ ಪರವಾಗಿ ಡಿಕ್ರಿ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

ವಕೀಲರು ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಸಹಿ/-
ಅಧಿಕ ಸಿವಿಲ್ ನ್ಯಾಯಾಧೀಶರು
ತಿಪಟೂರು.